## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದಿನಾಂಕ: 25.07.2015ರಂದು ನಡೆದ ನ್ಯಾಷನಲ್ ಸೆಮಿನಾರ್‌ಗೆ ಸಂಪನ್ಮೂಲ / ಪರಿಣಿತ ವ್ಯಕ್ತಿಯಾಗಿ ಶ್ರೀಮತಿ ಅದಿಷಾ ಚೌಧುರಿ, ಕಾರ್ಯದರ್ಶಿ ಹಾಗೂ ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಇವರು ಭಾಗವಹಿಸಿರುವುದಕ್ಕೆ ಘಟನೋತ್ತರ ಮಂಜೂರಾತಿ ನೀಡುವ ಬಗ್ಗೆ.

ಓದಲಾಗಿದೆ:
1. ಮದರ್ ತೆರೆಸಾ ಮಹಿಳಾ ವಿಶ್ವವಿದ್ಯಾನಿಲಯ, ಕೊಡೈಕೆನಾಲ್, ಇವರ ಆಮಂತ್ರಣ ಪತ್ರಿಕೆ.
2. ಶ್ರೀಮತಿ ಅದಿಷಾ ಚೌಧುರಿ, ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ ಇವರ ದಿನಾಂಕ: 29.8.2015ರ ಪತ್ರ.

ಪ್ರಸ್ತಾವನೆ:

"Crisis in Indian Agriculure" ವಿಷಯದ ಕುರಿತು ದಿನಾಂಕ: 25.07.2015ರಂದು ಕೊಡೈಕೆನಾಲ್‌ನಲ್ಲಿ ನಡೆಯಲಿರುವ ನ್ಯಾಷನಲ್ ಸೆಮಿನಾರ್ ಕಾರ್ಯಕ್ರಮದಲ್ಲಿ ಸಂಪನ್ಮೂಲ ವ್ಯಕ್ತಿ / ಪರಿಣಿತ ವ್ಯಕ್ತಿಯಾಗಿ ಭಾಗವಹಿಸಲು ಶ್ರೀಮತಿ ಅದಿಷಾ ಚೌಧುರಿ, ಕಾರ್ಯದರ್ಶಿಗಳು ಮತ್ತು ಸದಸ್ಯ ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ, ಇವರನ್ನು ಮೇಲೆ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಆಹ್ವಾನ ಪತ್ರಿಕೆಯಲ್ಲಿ ಆಹ್ವಾನಿಸಲಾಗಿರುತ್ತದೆ.

ಮೇಲ್ಕಂಡ ಸಮ್ಮೇಳನದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿರುವುದಕ್ಕೆ ಮಂಜೂರಾತಿ ನೀಡುವಂತೆ ಹಾಗೂ ನಿಯಮಾನುಸಾರ ಲಭ್ಯವಿರುವ ಪ್ರಯಾಣ ಭತ್ಯೆಯನ್ನು ಮಂಜೂರು ಮಾಡುವಂತೆ ಶ್ರೀಮತಿ ಅದಿಷಾ ಚೌಧುರಿ, ಕಾರ್ಯದರ್ಶಿಗಳು ಮತ್ತು ಸದಸ್ಯ ಕಾರ್ಯದರ್ಶಿಗಳು, ಇವರು ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಪತ್ರದಲ್ಲಿ ಕೋರಿರುತ್ತಾರೆ.

ಪ್ರಸ್ತಾವನೆ ಬಗ್ಗೆ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ

**ಸರ್ಕಾರಿ ಆದೇಶ ಸಂಖ್ಯೆ: ಪಿಡಿ 19 ಎಸ್‌ಪಿಎ 2015, ಬೆಂಗಳೂರು, ದಿನಾಂಕ: 07.09.2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಅದಿಷಾ ಚೌಧುರಿ, ಕಾರ್ಯದರ್ಶಿಗಳು ಮತ್ತು ಸದಸ್ಯ ಕಾರ್ಯದರ್ಶಿಗಳು, ರಾಜ್ಯ ಯೋಜನಾ ಮಂಡಳಿ, ಇವರು ಮದರ್ ತೆರೆಸಾ ಮಹಿಳಾ ವಿದ್ಯಾನಿಲಯ, ಇವರು ಕೊಡೈಕೆನಾಲ್‌ನಲ್ಲಿ ದಿನಾಂಕ: 25.07.2015ರಂದು ಏರ್ಪಡಿಸಿರುವ ಸಮ್ಮೇಳನದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿರುವುದಕ್ಕೆ ಘಟನೋತ್ತರ ಮಂಜೂರಾತಿ ನೀಡಲಾಗಿದೆ.

ಸದರಿ ಅಧಿಕಾರಿಯವರು ನಿಯಮಾನುಸಾರ ಪ್ರಯಾಣ ಭತ್ಯೆ ಹಾಗೂ ದಿನಭತ್ಯೆಗೆ ಅರ್ಹರಿರುತ್ತಾರೆ.

ಈ ಉದ್ದೇಶಕ್ಕಾಗಿ ತಗಲುವ ವೆಚ್ಚವನ್ನು ರಾಜ್ಯ ಯೋಜನಾ ಮಂಡಳಿಯ 2015-16ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ "3451-00-101-4-00-041" (ಯೋಜನೇತರ) ಪ್ರಯಾಣ ವೆಚ್ಚಗಳ ಅಡಿಯಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ (ಎಸ್-3)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.